...

360 (726) : ಶ್ರೀ ನರಸಿಂಹ ನಾಯಕ್ (ರಾಜೂಗೌಡ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗ್ರಾಮ ಪಂಚಾಯಿತಿಯಿಂದ ಸಲ್ಲಿಕೆಯಾಗುತ್ತಿರುವ ಜಿಲ್ಲಾ ಪಂಚಾಯತ್ ಸದಸ್ಯರ ಅನುದಾನವನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ರದ್ದುಗೊಳಿಸಿ ಜಿಲ್ಲಾ ಪಂಚಾಯತ್ ಸದಸ್ಯರಿಗೆ ನೀಡುವ ಬಗ್ಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ;

ಆ) ಈ ಪ್ರಸ್ತಾವನೆ ಈಗ ಯಾವ ಹಂತದಲ್ಲಿದೆ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಗ್ರಾಮ ಪಂಚಾಯತಿಯಿಂದ ಜಿಲ್ಲಾ ಪಂಚಾಯತಿ ಸದಸ್ಯರಿಗೆ ಯಾವುದೇ ಅನುದಾನ ಸಲ್ಲಿಕೆಯಾಗುತ್ತಿಲ್ಲವಾದ್ದರಿಂದ ಇದನ್ನು ಗ್ರಾಮ ಪಂಚಾಯತಿ ವ್ಯಾಪ್ತಿಯಿಂದ ರದ್ದುಗೊಳಿಸಿ ಜಿಲ್ಲಾ ಪಂಚಾಯತ್ ಸದಸ್ಯರಿಗೆ ನೀಡಲು ಸರ್ಕಾರದ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ಆ) – ಉದ್ಭವಿಸುವುದಿಲ್ಲ –

...

364 (762) : ಶ್ರೀ ನಿರ್ಮಲ್ ಸುರಾನ (ಭಾರತೀನಗರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 1944ರಲ್ಲಿ ಮಹಾನಗರ ವ್ಯಾಪ್ತಿಯಲ್ಲಿರುವ (ಈಗಿನಂತೆ) ಬಿನ್ನಮಂಗಲ ಗ್ರಾಮದ ಸರಹದ್ದಿನಲ್ಲಿ ಸ್ಥಾಪನೆಗೊಂಡ ಕ್ಷಯ ಮತ್ತು ಎದೆ ರೋಗಿಗಳ ಆಸ್ಪತ್ರೆಯನ್ನು ಏಕಾಏಕಿ ಮುಚ್ಚುವ ನಿರ್ಧಾರ ಕೈಗೊಂಡಿದ್ದರ ಹಿನ್ನೆಲೆ ಏನು;

ಆ) ಈ ಆಸ್ಪತ್ರೆಯನ್ನು ಮಾನಸಿಕ ರೋಗಿಗಳ ಸಾಂತ್ವನ ಕೇಂದ್ರಗಳನ್ನಾಗಿ ಪರಿವರ್ತಿಸುತ್ತೇವೆಂದು (15–6–2004 ರಂದು ಆಯುಕ್ತರು, ಆರೋಗ್ಯ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯದಂತೆ) ನಿರ್ಧಾರದ ಹಿಂದೆ ಇರತಕ್ಕ ಭಾಧ್ಯತೆ ಎಷ್ಟು;

ಇ) ಈ ಹಿಂದೆ ನಗರದ ಕೆಂಪೇಗೌಡ ರಸ್ತೆಯಲ್ಲಿನ ಲೇಡಿ ವೆಲ್ಲಿಂಗ್ಟನ್ ಆಸ್ಪತ್ರೆ ಮುಚ್ಚುವಾಗಲೂ ಇದೇ ತರನಾದ ಭರವಸೆ ನೀಡಿದ್ದರೂ ಕಾರ್ಯಗತವಾಗದಿರುವುದು ಸರ್ಕಾರದ ಗಮನದಲ್ಲಿದೆಯೇ;

ಈ) ಈ ಆಸ್ಪತ್ರೆಯನ್ನು ಯಥಾಸ್ಥಿತಿಯಲ್ಲಿ ಕ್ಷಯ ರೋಗಿಗಳಿಗಾಗಿಯೇ ಉಳಿಸಿಕೊಳ್ಳುವ ಮತ್ತು ಮುಂದುವರೆಸುವ ನಿರ್ಧಾರ ಕೈಗೊಳ್ಳುವುದೇ?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ಈ ಆಸ್ಪತ್ರೆಯನ್ನು ಮುಚ್ಚುವ ಬಗ್ಗೆ ಅಂತಿಮ ತೀರ್ಮಾನವನ್ನು ತೆಗೆದುಕೊಂಡಿರುವುದಿಲ್ಲ.

ಆ) ಒಂದು ವೇಳೆ ಈ ಆಸ್ಪತ್ರೆಯನ್ನು ಮುಚ್ಚುವ ತೀರ್ಮಾನ ತೆಗೆದುಕೊಂಡಲ್ಲಿ ಆಗ ಇದನ್ನು ಮಾನಸಿಕ ರೋಗಿಗಳ ಸಾಂತ್ವನ ಕೇಂದ್ರವನ್ನಾಗಿ ಪರಿವರ್ತಿಸಲಾಗುವುದು.

ಇ) ಭರವಸೆಯಂತೆ ಕೆಂಪೇಗೌಡ ರಸ್ತೆಯಲ್ಲಿರುವ ಲೇಡಿ ವೆಲ್ಲಿಂಗ್ಟನ್ ರಾಜ್ಯ ಕ್ಷಯರೋಗ ಕೇಂದ್ರ ಬದಲಿಗೆ ಮಾಗಡಿ ರಸ್ತೆಯಲ್ಲಿ ಹೊಸ ಕ್ಷಯರೋಗ ಕೇಂದ್ರವನ್ನು ಕಟ್ಟಲು ನಿರ್ಧರಿಸಲಾಯಿತು.

ಅದರಂತೆ ಮಾಗಡಿ ರಸ್ತೆಯಲ್ಲಿರುವ ಕುಷ್ಠರೋಗ ಆಸ್ಪತ್ರೆ ಸಮುಚ್ಚಯ ಜಾಗದಲ್ಲಿ 200 x 300 ಅಡಿ ಜಾಗದಲ್ಲಿ ಹೊಸ ಕಟ್ಟಡ ಕಟ್ಟಲು ರೂ. 165 ಲಕ್ಷಗಳ ಆಡಳಿತಾತ್ಮಕ ಅನುಮತಿ ನೀಡಲಾಗಿದೆ. ಹಾಗೂ 2004–05ರಲ್ಲಿ 55 ಲಕ್ಷ ರೂ.ಗಳನ್ನು ನಿಗದಿಪಡಿಸಲಾಗಿದೆ.

ಈ) ಇನ್ನೂ ಅಂತಿಮ ನಿರ್ಧಾರ ತೆಗೆದುಕೊಳ್ಳದೇ ಇರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

...

368 (122) : ಶ್ರೀ ಪದ್ಮನಾಭ ಕೊಟ್ಟಾರಿ ಕೆ (ವಿಟ್ಲ) ಮಾನ್ಯ ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ವಿಟ್ಲದಲ್ಲಿರುವ (ಐ.ಟಿ.ಐ.) ಕೈಗಾರಿಕಾ ತರಬೇತಿ ಕೇಂದ್ರಕ್ಕೆ ಸ್ವಂತ ಕಟ್ಟಡ ಮತ್ತು ಶಿಕ್ಷಣಕ್ಕೆ ಬೇಕಾಗುವ ಉಪಕರಣ ಹಾಗೂ ಸೂಕ್ತ ಸಿಬ್ಬಂದಿ ವರ್ಗ ಇಲ್ಲದೆ ಇರುವುದನ್ನು ಸರ್ಕಾರ ಗಮನಿಸಿದೆಯೇ;

ಆ) ಈ ಶಿಕ್ಷಣ ಸಂಸ್ಥೆಯ ಕಟ್ಟಡಕ್ಕೆ ಬೇಕಾಗುವ ಸ್ಥಳ, ಹಣದ ವ್ಯವಸ್ಥೆ ಮುಂತಾದವುಗಳ ಬಗ್ಗೆ ಕ್ರಿಯಾ ಯೋಜನೆಯನ್ನು ಸರ್ಕಾರ ರೂಪಿಸಿದೆಯೆ;

ಇ) ಹೌದಾದಲ್ಲಿ, ಅದರ ವಿವರಗಳೇನು;

ಈ) ಗ್ರಾಮಾಂತರ ವಿದ್ಯಾರ್ಥಿಗಳಿಗೆ ಸಹಾಯಕವಾಗುವ ಈ ಐ.ಟಿ.ಐ. ಸಂಸ್ಥೆಯನ್ನು ಸುವ್ಯವಸ್ಥೆಗೊಳಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ? (ವಿವರ ಒದಗಿಸವುದು)

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು)

ಅ) ಹೌದು

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಈ) ಆಯವ್ಯಯದ ಲಭ್ಯತೆ ಅನುಸಾರ ಕ್ರಮ ಕೈಗೊಳ್ಳಲಾಗುವುದು.

...

370 (129) : ಶ್ರೀ ಪದ್ಮನಾಭ ಕೊಟ್ಟಾರಿ ಕೆ. (ವಿಟ್ಲ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಿಟ್ಲ ವಿಧಾನಸಭಾ ವ್ಯಾಪ್ತಿಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಅನುಕೂಲ ಮಾಡಿಕೊಡಲಾಗಿದೆ;

ಆ) ಕೊಳವೆಬಾವಿ ಮತ್ತಿತರ ವ್ಯವಸ್ಥೆಗಳ ಮೂಲಕ ಎಷ್ಟು ಎಕರೆ ಭೂಮಿಗಳಿಗೆ ನೀರಾವರಿ ಸೌಲಭ್ಯ ಒದಗಿಸಿಕೊಡಲಾಗಿದೆ; (ವಿವರಗಳನ್ನು ಒದಗಿಸುವುದು)?

ಶ್ರೀ ಧರ್ಮಸಿಂಗ್ (ಮಾನ್ಯ ಮುಖ್ಯಮಂತ್ರಿಗಳು)

ಅ) ವಿಟ್ಲ ವಿಧಾನಸಭಾ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ಈ ಕೆಳಕಂಡಂತೆ ಕೊಳವೆ ಬಾವಿಗಳನ್ನು ಗಂಗ ಕಲ್ಯಾಣ ಯೋಜನೆಯಡಿ ಕೊರೆದು ಅನುಕೂಲ ಮಾಡಲಾಗಿದೆ.